ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 7–12–2019

# ಪತ್ರಿಕಾ ಆಮಂತ್ರಣ

1. ಯಲಹಂಕ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಭವನ ಹಾಗೂ ವಿವಿಧ ಅಭಿವೃದ್ಧಿ ಕಾರ್ಯಗಳ ಉದ್ಘಾಟನಾ ಸಮಾರಂಭ.

ಉದ್ಘಾಟನೆ:

ಶ್ರೀ ಬಿ. ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಜ್ಯೋತಿ ಬೆಳಗಿಸುವವರು:

ಶ್ರೀಮತಿ ನಿರ್ಮಲ ಸೀತಾರಾಮನ್,
ಕೇಂದ್ರದ ಹಣಕಾಸು ಹಾಗೂ ಕಾರ್ಪೋರೇಟ ವ್ಯವಹಾರಗಳ ಸಚಿವರು

ಶ್ರೀ ಡಿ. ವಿ. ಸದಾನಂದಗೌಡ,
ಕೇಂದ್ರದ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು

ಡಾ. ಸಿ.ಎನ್. ಅಶ್ವತ್ಥ ನಾರಾಯಣ,
ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

ಶ್ರೀ ಗೋವಿಂದ ಎಂ. ಕಾರಜೋಳ,
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು.

ಅಧ್ಯಕ್ಷತೆ:

ಶ್ರೀ ಎಸ್.ಆರ್. ವಿಶ್ವನಾಥ್,
ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಹಾಗೂ ಶಾಸಕರು, ಯಲಹಂಕ ವಿಧಾನಸಭಾ ಕ್ಷೇತ್ರ

ಘನ ಉಪಸ್ಥಿತಿ:

ಶ್ರೀ ಎಂ. ಗೌತಮ್ ಕುಮಾರ್,

ಪೂಜ್ಯ ಮಹಾಪೌರರು,
ಬೃಹತ್ ಬೆಂಗಳೂರು ಮಹಾನಗರಪಾಲಿಕೆ

ದಿನಾಂಕ: 08-12-2019 ಭಾನುವಾರ ಸಮಯ: ಬೆಳಿಗ್ಗೆ 10.30 ಗಂಟೆಗೆ
ಸ್ಥಳ: ಯಲಹಂಕ ಉಪನಗರ, ವಾರ್ಡ್-04, ವೆಂಕಟೇಶ್ವರ ದೇವಸ್ಥಾನದ ರಸ್ತೆ, ಯಲಹಂಕ ಉಪನಗರ, ಬೆಂಗಳೂರು.

2. ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವಗಳು, ಗೃಹರಕ್ಷಕದಳ, ಪೌರರಕ್ಷಣೆ ಹಾಗೂ ರಾಜ್ಯ ವಿಪತ್ತು ಸ್ಪಂದನಾ ಪಡೆಗಳ ವೃತ್ತಿ ಸ್ಪರ್ಧೆ ಹಾಗೂ ಕ್ರೀಡಾಕೂಟ 2019-20ರ ಉದ್ಘಾಟನಾ ಸಮಾರಂಭ.

ಮುಖ್ಯ ಅತಿಥಿ ಹಾಗೂ ಕ್ರೀಡಾಕೂಟ ಉದ್ಘಾಟನೆ:

ಶ್ರೀ ಎಂ.ಎನ್. ರೆಡ್ಡಿ, ಐ.ಪಿ.ಎಸ್.,
ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ಸಮಾದೇಷ್ಟರು,
ಗೃಹರಕ್ಷಕ ದಳ, ನಿರ್ದೇಶಕರು ಪೌರರಕ್ಷಣೆ,
ಮಹಾ ನಿರ್ದೇಶಕರು ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ
ನಿರ್ದೇಶಕರು, ರಾಜ್ಯ ವಿಪತ್ತು ಸ್ಪಂದನಾ ಪಡೆ, ಕರ್ನಾಟಕ.

ವಿಶೇಷ ಆಹ್ವಾನಿತರು:

ಶ್ರೀ ಅನೂಪ್ ಶ್ರೀಧರ್,
ಅಂತರರಾಷ್ಟ್ರೀಯ ಬ್ಯಾಡ್ಮಿಂಟನ್ ಕ್ರೀಡಾಪಟು.

ದಿನಾಂಕ: 09-12-2019 ಸೋಮವಾರ, ಸಮಯ: ಬೆಳಿಗ್ಗೆ 9.30 ಗಂಟೆಗೆ

ಸ್ಥಳ: ಆರ್.ಎ. ಮುಂಡ್ಕುರ್ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಕಾಡೆಮಿ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560 029.

## ಪತ್ರಿಕಾ ಪ್ರಕಟಣೆ

# ತಾಂತ್ರಿಕೇತರ ಹುದ್ದೆಗಳ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು, ಡಿಸೆಂಬರ್ 07 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 25-11-2017ರಲ್ಲಿ ಅಧಿಸೂಚಿಸಿರುವ ಈ ಕೆಳಕಂಡ ಗ್ರೂಪ್ 'ಸಿ' ತಾಂತ್ರಿಕೇತರ ಹುದ್ದೆಗಳ 1:3 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ

ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ದಿನಾಂಕ: 3-12-2019 ರಂದು ಆಯೋಗದ ವೆಬ್‌ಸೈಟ್ ತಿತಿತಿ.ಞಠಿಛಿ.ಞಚಿಡಿ.ಟಿಛಿ.ಟಿ ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮಾದರಿ ವಸತಿ ಶಾಲೆ (ನವೋದಯ) ದಲ್ಲಿ ಕಚೇರಿ ಅಧೀಕ್ಷಕರು 02 ಹುದ್ದೆಗಳು, ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಪ್ರಥಮ ದರ್ಜೆ ಗಣಕಯಂತ್ರ ಸಹಾಯಕರು 31 (26+5 ಹೈ.ಕ) ಹುದ್ದೆಗಳು, ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಹೆಣ್ಣು ಮಕ್ಕಳ ಪದವಿ ಪೂರ್ವ ಕಾಲೇಜುಗಳಲ್ಲಿನ ನಿಲಯಪಾಲಕರು (ಮಹಳೆ) 12 (9+3 ಹೈ.ಕ.) ಹುದ್ದೆಗಳು.

ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರಥಮ ದರ್ಜೆ ಗಣಕಯಂತ್ರ ಸಹಾಯಕರು 12 (9+3 ಹೈ.ಕ.) ಹುದ್ದೆಗಳು, ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ನಿಲಯ ಪಾಲಕರು (ಪುರುಷ) 26(21+1 ಹೈ.ಕ) ಹುದ್ದೆಗಳು.

ಅಲ್ಪಸಂಖ್ಯಾತರ ನಿರ್ದೇಶನಾಯಲಯದಲ್ಲಿನ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಮೇಲ್ವಿಚಾರಕರು (ಪುರುಷ) 04 (2+2 ಹೈ.ಕ) ಹುದ್ದೆಗಳು, ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಮೇಲ್ವಿಚಾರಕರು (ಮಹಿಳೆ) 03 (2+1 ಹೈ.ಕ) ಹುದ್ದೆಗಳು. ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿನ ಲೆಕ್ಕ ಸಹಾಯಕರು 18 (15+3 ಹೈ.ಕ) ಹುದ್ದೆಗಳು.

## ರಾಜ್ಯದ 275 ಸ್ಥಳೀಯ ಸಂಸ್ಥೆಗಳ ಹಾಗೂ ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ 7 ವಲಯ ಪಟ್ಟಣ ವ್ಯಾಪಾರ ಸಮಿತಿ ಸದ್ಯಸರ ಆಯ್ಕೆಗಾಗಿ ಚುನಾವಣೆ

ಬೆಂಗಳೂರು, ಡಿಸೆಂಬರ್ 7 (ಕರ್ನಾಟಕ ವಾರ್ತೆ)

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ನಾಟಕ ಬೀದಿ ಬೀದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ಬೀದಿ ಬದಿ ವ್ಯಾಪಾರ ನಿಯಂತ್ರಣ) ನಿಯಮಗಳು 2019 ರನ್ವಯ ಪಟ್ಟಣ ವ್ಯಾಪಾರ ಸಮಿತಿಗೆ ಚುನಾವಣೆ ನಡೆಸಲು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಹಾಗೂ ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು ಅವರುಗಳಿಂದ ಸ್ವೀಕೃತವಾಗಿರುವ ವರದಿಯನ್ವಯ ಕರ್ನಾಟಕ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ಸಂರಕ್ಷಣೆ ಮತ್ತು ಬೀದಿ ಬದಿ ವ್ಯಾಪಾರ ನಿಯಂತ್ರಣ) ನಿಯಮಗಳು 2019 ರ ನಿಯಮ 5(2) 6(2) ಹಾಗೂ ಅನುಸೂಚಿ (4) ರಲ್ಲಿನ ದತ್ತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯದ 275 ಸ್ಥಳೀಯ ಸಂಸ್ಥೆಗಳ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 7 ವಲಯಗಳ ಪಟ್ಟಣ ವ್ಯಾಪಾರ ಸಮಿತಿಗೆ ಸದಸ್ಯರನ್ನು (ಪ್ರತಿನಿಧಿಗಳ) ಆಯ್ಕೆ ಮಾಡುವ ಸಲುವಾಗಿ ಅವುಗಳ ಮುಂದೆ ತಿಳಿಸಿರುವ ಸ್ಥಳಗಳಲ್ಲಿ ದಿನಾಂಕ: 21-12-2019 ರಂದು (ಸಮಯ ಬೆಳಿಗ್ಗೆ 9.00 ರಿಂದ ಸಂಜೆ 4.00 ಗಂಟೆಯವರೆಗೆ) ಚುನಾವಣೆಯನ್ನು ನಡೆಸಲು ಆದೇಶಿಸಿದೆ.

ನಾಮಪತ್ರಗಳನ್ನು ಸಲ್ಲಿಸಲು ನಿಗಧಿಪಡಿಸಿದ ಅವಧಿ – 09-12-2019 ರಿಂದ 13-12-2019 ರವರೆಗೆ ಸಮಯ ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯವರೆಗೆ.

ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ: 14–12–2019ರ ಬೆಳಿಗ್ಗೆ 11.00 ಗಂಟೆಯಿಂದ. ಸಿಂಧುವಾದ ನಾಮಪತ್ರಗಳನ್ನು ಪ್ರಟಿಸಬೇಕಾದ ದಿನಾಂಕ: 14–12–2019 ರಂದು ಮಧ್ಯಾಹ್ನ 3–00 ಗಂಟೆಗೆ.

ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ: 15–12–2019 ಸಂಜೆ 5.00 ಗಂಟೆಗಿಂತ ಮುಂಚೆ. ಅಂತಿಮವಾಗಿ ಕಣದಲ್ಲಿರುವ ಅಭ್ಯರ್ಥಿಗಳ ಪಟ್ಟಿ ಪ್ರಕಟಣೆ 15–12–2019 ರಂದು ಸಂಜೆ 5.30 ಗಂಟೆಗೆ.

ಅಗತ್ಯಬಿದ್ದಲ್ಲಿ ಮತದಾನ ನಡೆಯುವ ದಿನಾಂಕ, ಸ್ಥಳ ಮತ್ತು ಮತದಾನದ ಸಮಯ 21–12–2019 ಸಮಯ ಬೆಳಿಗ್ಗೆ 9.00 ರಿಂದ ಸಂಜೆ 4.00 ಗಂಟೆಯವರೆಗೆ. ಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸಿ, ಚುನಾವಣೆ ಫಲಿತಾಂಶ ಪ್ರಕಟಣೆ ದಿನಾಂಕ: 21.12.2019.

# ಪ್ರವೇಶ ಪತ್ರ

ಬೆಂಗಳೂರು, ಡಿಸೆಂಬರ್ 7 (ಕರ್ನಾಟಕ ವಾರ್ತೆ)

ಆಯೋಗವು ದಿನಾಂಕ 16–12–2019, 17–12–2019, 18–12–2019 ಮತ್ತು 19–12–2019 ರಂದು ನಡೆಸುವ ಅಲ್ಪಸಂಖ್ಯಾತರ ಇಲಾಖೆಯ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರು ಹಾಗೂ ವಿವಿಧ ವಿಷಯಗಳ ಶಿಕ್ಷಕರುಗಳು ಹಾಗೂ ವಿವಿಧ ಗ್ರೂಪ್–ಎ ಮತ್ತು ಗ್ರೂಪ್–ಬಿ ತಾಂತ್ರಿಕ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ " ಪ್ರವೇಶ ಪತ್ರಗಳನ್ನು " ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಅಭ್ಯರ್ಥಿಗಳು ಆಯೋಗದ ವೆಬ್ ಸೈಟ್ "**http://kpsc. kar. nic.in**" ನಲ್ಲಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಮೊದಲು **User Name & Password** ನಮೂದಿಸಿ **Log in** ಆದ ನಂತರ **My Application** ಮೇಲೆ ಕ್ಲಿಕ್ ಮಾಡಿ ನಂತರ 2018 ವರ್ಷ ನಮೂದಿಸಿ, **Advertisement Type** ನಲ್ಲಿ **Direct Recruitment** ಅನ್ನು **Select** ಮಾಡಿ ನಂತರ **Post Name** ನಲ್ಲಿ **E(1)259/2018/19/PSC / E(1)265/2018-19/PSC - Head Masters / Teachers in various subjects in Minorities Moulana Azad Model Schools in the Dept.of Minorities & PSC 1 RTB-1/2018 / PSC 1 RTB-2/2018 - Group-A / Group-B Technical posts COMPETITIVE EXAM - 2019** ಎಂಬುದನ್ನು ಕ್ಲಿಕ್ ಮಾಡಬೇಕು. ನಂತರ **Check Box** ಅನ್ನು ಟಿಕ್ ಮಾಡಿದ ನಂತರ **Admission Ticket** ಮೇಲೆ ಕ್ಲಿಕ್ ಮಾಡಿ **Print** ಅನ್ನು ಕ್ಲಿಕ್ ಮಾಡಿದಲ್ಲಿ ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರವನ್ನು ಡೌನ್ ಲೋಡ್ ಮಾಡಿಕೊಳ್ಳಬಹುದು.

ಅರ್ಹ ಅಭ್ಯರ್ಥಿಗಳು ಪ್ರವೇಶ ಪತ್ರ ಡೌನ್‌ಲೋಡ್ ಮಾಡಲು ತಾಂತ್ರಿಕ ಸಮಸ್ಯೆ ಎದುರಾದಲ್ಲಿ **Help Line** ಸಂಖ್ಯೆ: **7406086807, 7406086801** ಅನ್ನು ಸಂಪರ್ಕಿಸಬಹುದು ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಡಿಸೆಂಬರ್ 7 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: **08-12-2019** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ **8.00** ಗಂಟೆಯಿಂದ ಸಂಜೆ **5.00** ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ **7.00** ಗಂಟೆಯಿಂದ ಬೆಳಿಗ್ಗೆ **8.00** ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಜಲ್ಪಾ ಎಂ ದೇವ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

- ಬೆಳಿಗ್ಗೆ **8.00** ಗಂಟೆಯಿಂದ ಬೆಳಿಗ್ಗೆ **9.00** ಗಂಟೆಯವರೆಗೆ ಬಾಲಭವನ ಸೊಸೈಟಿ ಸಹಯೋಗದೊಂದಿಗೆ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಹಂಸ ಧ್ವನಿ ಸಂಗೀತ ಶಾಲೆ ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಶ್ರೀ ಸಿ. ಟಿ. ರವಿ ಪ್ರವಾಸೋದ್ಯಮ ಕನ್ನಡ ಮತ್ತು ಸಂಸ್ಕೃತಿ ಹಾಗೂ ಸಕ್ಕರ ಸಚಿವರಾಗಿ  ದಿನಗಳನ್ನು ಪೂರೈಸಿರುವ ಸಂದರ್ಭದಲ್ಲಿ ವಿಧಾನ ಸೌಧದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ನೀಡಿರುವ ಮಾಹಿತಿಗಳನ್ನು ಇದರೊಂದಿಗೆ ಲಗತ್ತಿಸಿದೆ.